# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:135 RNI NO.KAR KAN/2003/10452:No./PMG/KA/NK/BM/743/24-26 ಬುಧವಾರ ದಿನಾಂಕ: 24-04-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ಮೋದಿ ವಜಾಕ್ಕೆ ಎಚ್‌ಕೆಪಿ ಆಗ್ರಹ

ಹುಬ್ಬಳ್ಳಿ,ಏ23: ದೇಶದ ಪ್ರಧಾನಿಯಾಗಿರುವ ಪ್ರಧಾನ ನರೇಂದ್ರ ಮೋದಿ ಅವರು ದೇಶದ ಜನರಲ್ಲಿ ದ್ವೇಷ ಹರಡುವ ಭಾಷಣವನ್ನು ಮಾಡುತ್ತಿದ್ದು, ಇದನ್ನು ಚುನಾವಣೆ ಆಯೋಗ ಗಂಭೀರವಾಗಿ ಪರಿಗಣಿಸಿ ಚುನಾವಣೆ ಪ್ರಕ್ರಿಯೆಯಿಂದ ಮೋದಿ ಅವರನ್ನು ವಜಾಗೊಳಿಸಬೇಕೆಂದು ಸಚಿವ ಹೆಚ್.ಕೆ. ಪಾಟೀಲ್ ಆಗ್ರಹಿಸಿದ್ದಾರೆ. ನಗರದಲ್ಲಿಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಷ್ಟ್ರದ ಪ್ರಜಾಪ್ರಭುತ್ವದ ಕುರಿತು ಮೋದಿ ಅವರು ಬಳಸುತ್ತಿರುವ ಶಬ್ದ, ಭಾಷೆಗಳನ್ನು ನೋಡಿದರೇ ಓರ್ವ ಪಾಲಿಕೆ ಸದಸ್ಯ ಕೂಡಾ ಅಷ್ಟು ಕೆಳಮಟ್ಟದ ಮಾತುಗಳನ್ನು ಹೇಳುವುದಿಲ್ಲ, ಸಮಾಜದಲ್ಲಿ ದ್ವೇಷ ಹುಟ್ಟಿಸುವ ಮಾತುಗಳನ್ನು ಯಾರೂ ಈವರೆಗೆ ಆಡಿಲ್ಲ, ಆದರೆ ಮೋದಿಯವರು ಧರ್ಮಗಳ ಹೆಸರಿನಲ್ಲಿ ಧರ್ಮಿಯರ ಹೆಸರಿನಲ್ಲಿ, ಭಾಷಾ ಪ್ರಯೋಗ ಮಾಡಿದ್ದಾರೆ. ಭಾಷಣದಲ್ಲಿ ಮುಸ್ಲಿಂ ಸಮೂದಾಯವನ್ನೇ ಗುರಿಯಾಗಿಸಿಕೊಂಡು ದ್ವೇಷದ ಮಾತು ಆಡಿದ್ದಾರೆ. ಈ ಎಲ್ಲ ನೋಡಿದಾಗ ಚುನಾವಣೆ ಆಯೋಗ ಹೊರಡಿಸಿದ ನೀತಿ ಸಂಹಿತೆ ಸಂಪೂರ್ಣವಾಗಿ ಉಲ್ಲಂಘನೆ ಆಗಿದ್ದು, ಈ ಬಗ್ಗೆ ಚುನಾವಣೆ ಆಯೋಗ ಸುಮೋಟೋ ಪ್ರಕರಣವನ್ನು ದಾಖಲಿಸಿಕೊಂಡು ನರೇಂದ್ರ ಮೋದಿ ಅವರನ್ನು ಚುನಾವಣೆ ಪ್ರಕ್ರಿಯೆಯಿಂದ ವಜಾಗೊಳಿಸಬೇಕೆಂದು ಒತ್ತಾಯಿಸಿದರು.ನರೇಂದ್ರ ಮೋದಿ ಅವರು ಚುನಾವಣೆ ಸಂದರ್ಭದಲ್ಲಿ ಹಸಿ ಸುಳ್ಳುಗಳನ್ನು ಹೇಳುತ್ತಿದ್ದಾರೆ. ಇದರಿಂದ ಅವರ ಅಭಿಮಾನಗಳೇ ತಲೆ ತಲೆ ಬಡಿದುಕೊಳ್ಳುವ ವಾತಾವರಣ ನಿರ್ಮಾಣ ಮಾಡಿದ್ದಾರೆ. 135 ವರ್ಷ ಇತಿಹಾಸವುಳ್ಳ ಕಾಂಗ್ರೆಸ್ ಪಕ್ಷ ಜನರ ಆಸ್ತಿ, ತಾಳಿ ಕಿತ್ತುಕೊಳ್ಳುತ್ತದೆ ಎಂದು ಜನರಲ್ಲಿ ಗೊಂದಲ ಉಂಟು ಮಾಡುತ್ತಿದ್ದಾರೆ. ಆದರೆ ಕಾಂಗ್ರೆಸ್ ಪಕ್ಷ ಯಾವತ್ತೂ ಗೂಂಡಾಗಿರಿ ಮಾಡಿಲ್ಲ, ತಾಳಿ ಭಾಗ್ಯ ಕೊಟ್ಟಿದೆ. ಗ್ಯಾರಂಟಿ ಮೂಲಕ ಜನರಿಗೆ ಬದುಕು ಕಟ್ಟಿಕೊಟ್ಟಿದ್ದೇವೆ ಎಂದು ಬಿಜೆಪಿ ವಿರುದ್ಧ ಅವರು ಹರಿಹಾಯ್ದರು.ಪತ್ರಿಕಾಗೋಷ್ಠಿಯಲ್ಲಿ ಶಾಸಕ ಪ್ರಸಾದ್ ಅಬ್ಬಯ್ಯ, ಮಾಜಿ ಸಚಿವ ಎ.ಎಮ್.ಹಿಂಡಸಗಿರಿ, ಮುಖಂಡರಾದ ಅಲ್ತಾಫ್ ಹಳ್ಳೂರು, ಹೆಚ್.ಎಫ್.ಜಕ್ಕಪ್ಪನವರ ಮುಂತಾದವರು ಇದ್ದರು.

## ಲೋಕಸಭಾ ಚುನಾವಣೆ: ಅಭ್ಯರ್ಥಿಗಳ ಖರ್ಚು- ವೆಚ್ಚ, ಲೆಕ್ಕಪತ್ರಗಳ ಮಾಹಿತಿ ಸಲ್ಲಿಸಲು ಸೂಚನೆ

ಬೆಳಗಾವಿ.ಏ.23 : 02-ಬೆಳಗಾವಿ ಲೋಕಸಭಾ ಕ್ಷೇತ್ರದ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳು ಜನತಾ ಪ್ರಾತಿನಿಧ್ಯ ಕಾಯ್ದೆ 1951 ರ ಕಲಂ 77 ರ ಪ್ರಕಾರ ಚುನಾವಣಾ ಪ್ರಚಾರ ಅವಧಿಯಲ್ಲಿ ತಮ್ಮ ಚುನಾವಣಾ ಖರ್ಚು-ವೆಚ್ಚಗಳ ಮಾಹಿತಿಯನ್ನು ಕಡ್ಡಾಯವಾಗಿ ಮೂರು ಬಾರಿ ಚುನಾವಣಾ ವೆಚ್ಚ ವೀಕ್ಷಕರಿಗೆ ಸಲ್ಲಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ನತೇಶ್ ಪಾಟೀಲ ಅವರು ತಿಳಿಸಿದ್ದಾರೆ. ಅಭ್ಯರ್ಥಿಗಳು ತಮ್ಮ ಬ್ಯಾಂಕ್ ಪಾಸ್‌ಬುಕ್ ಜತೆಗೆ ಖರ್ಚು-ವೆಚ್ಚಗಳ ಲೆಕ್ಕ ಪುಸ್ತಕ, ಎಲ್ಲ ಮೂಲ ರಶೀದಿಗಳನ್ನು ಖುದ್ದಾಗಿ ಅಥವಾ ತಮ್ಮ ಚುನಾವಣಾ ಏಜೆಂಟ್ ಮೂಲಕ ಚುನಾವಣಾ ವೆಚ್ಚ ವೀಕ್ಷಕರಿಗೆ ಸಲ್ಲಿಸಬೇಕು.02-ಬೆಳಗಾವಿ ಲೋಕಸಭಾ ಕ್ಷೇತ್ರದ ಚುನಾವಣಾ ಕಣದಲ್ಲಿರುವ ಅಭ್ಯರ್ಥಿಗಳು ಜಿಲ್ಲಾಧಿಕಾರಿ ಕಚೇರಿಯ ಎರಡನೇ ಮಹಡಿಯಲ್ಲಿರುವ ಸಭಾಂಗಣದಲ್ಲಿ ಈ ಕೆಳಕಂಡ ಮೂರು ದಿನಾಂಕಗಳಂದು ಬೆಳಿಗ್ಗೆ 10ರಿಂದ ಸಂಜೆ 5 ಗಂಟೆಯ ಅವಧಿ ಯಲ್ಲಿ ತಮ್ಮ ಲೆಕ್ಕಪತ್ರಗಳನ್ನು ಪರಿಶೀಲನೆಗೆ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ.



- ಮೊದಲ ಪರಿಶೀಲನೆ- 26-4-2024
- ಎರಡನೇ ಪರಿಶೀಲನೆ-30-4-2024
- ಮೂರನೇ ಪರಿಶೀಲನೆ 04-5-2024

ಎಲ್ಲ ಅಭ್ಯರ್ಥಿಗಳು ನಿಗದಿತ ದಿನಾಂಕಗಳಂದು ಮಾಹಿತಿಯನ್ನು ಸಲ್ಲಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ನತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆಯಿಂದ 26ರವರೆಗೆ ನಿಷೇದಾಜ್ಞೆ ಜಾರಿ

ಬೆಂಗಳೂರು: 26ಕ್ಕೆ ಮೊದಲ ಹಂತದ ಲೋಕ ಮತದಾನ ಹಿನ್ನೆಲೆ ಬೆಂಗಳೂರಿನಲ್ಲಿ ನಾಳೆಯಿಂದ 26ರವರೆಗೆ ನಿಷೇದಾಜ್ಞೆ ಜಾರಿ ಮಾಡಲಾಗಿದೆ. ಬೆಂಗಳೂರಿನಲ್ಲಿ ಸೂಕ್ಷ್ಮ ಮತಗಟ್ಟೆ 1737, ಸಾಮಾನ್ಯ ಮತಗಟ್ಟೆ 6351, ಒಟ್ಟು 8088 ಮತಗಟ್ಟೆ ಕೇಂದ್ರಗಳಿವೆ. ಚುನಾವಣೆ ಹಿನ್ನಲೆ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ ಎಂದು ಸಿಟಿ ಪೊಲೀಸ್ ಕಮಿಷನರ್ ಮತ್ತು ಬಿಬಿಎಂಪಿ ಕಮಿಷನರ್ ಜಂಟಿ ಪತ್ರಿಕಾಗೋಷ್ಠಿ ಮಾಡಿ ತಿಳಿಸಿದ್ದಾರೆ.ಚುನಾವಣೆ ಹಿನ್ನೆಲೆ ಬಿಗಿ ಪೊಲೀಸ್ ಬಂದೋಬಸ್ತ್ ಸಿಟಿ ಪೊಲೀಸ್ ಕಮಿಷನರ್ ಸೇರಿ ಮೂವರು ಹೆಚ್ಚುವರಿ ಪೊಲೀಸ್ ಆಯುಕ್ತರು, ಜಂಟಿ ಪೊಲೀಸ್ ಆಯುಕ್ತರು, 24 ಡಿಸಿಪಿ, 52 ಎಸಿಪಿ , 118 ಇನ್‌ಪೆಕ್ಟರ್ ಸೇರಿ 9397 ಪೊಲೀಸ್ ಅಧಿಕಾರಿ ಸಿಬ್ಬಂದಿ ವರ್ಗ ನಿಯೋಜನೆ. 3919 ಹೋಮ್ ಗಾರ್ಡ್, 11 ಸೆಂಟ್ರಲ್ ಪೊಲೀಸ್ ಟೀಂ, 54 ಸಿಎಆರ್ ಮತ್ತು ಕೆಎಸ್‌ಆರ್‌ಪಿ ತುಕಡಿ ನಿಯೋಜನೆ ಮಾಡಲಾಗಿದೆ.

## ಮತ ಎಣಿಕಾ ಕೇಂದ್ರಕ್ಕೆ ಚುನಾವಣಾ ವೀಕ್ಷಕರೊಂದಿಗೆ ಜಿಲ್ಲಾಧಿಕಾರಿ ಭೇಟಿ

### ಸುಗಮ ಮತ ಎಣಿಕಾ ಕಾರ್ಯಕ್ಕೆ ಕೈಗೊಂಡಿರುವ ಸಿದ್ಧತೆಗಳ ಕುರಿತು ಮನವರಿಕೆ



ಬಳ್ಳಾರಿ,ಏ.23: ಬಳ್ಳಾರಿ ಲೋಕಸಭಾ ಸ್ಥಾನಕ್ಕಾಗಿ ಮೇ 07 ರಂದು ಮತದಾನ ನಡೆಯಲಿದ್ದು, ಮತಗಳ ಎಣಿಕಾ ಕಾರ್ಯ ಜೂ.04 ರಂದು ಬಳ್ಳಾರಿ ನಗರದ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ಇಂಜಿನಿಯರಿಂಗ್ ಕಾಲೇಜು ಕಟ್ಟಡದಲ್ಲಿ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಚಲಾವಣೆಗೊಂಡ ಮತಯಂತ್ರಗಳ ಸಂಗ್ರಹಾ ಕೊಠಡಿ (ಸ್ಟ್ರಾಂಗ್ ರೂಂ) ಹಾಗೂ ಮತಗಳ ಎಣಿಕಾ ಕಾರ್ಯಕ್ಕೆ ಕೈಗೊಳ್ಳಲಾಗುತ್ತಿರುವ ಸಿದ್ಧತೆಗಳ ಕುರಿತು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಚುನಾವಣಾ ಸಾಮಾನ್ಯ ವೀಕ್ಷಕರು ಹಾಗೂ ಪೊಲೀಸ್ ವೀಕ್ಷಕರಿಗೆ ಮಾಹಿತಿ ನೀಡಿ ಮನವರಿಕೆ ಮಾಡಿಕೊಟ್ಟರು.

ಬಳ್ಳಾರಿ ನಗರದ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ಇಂಜಿನಿಯರಿಂಗ್ ಕಾಲೇಜು ಕಟ್ಟಡಕ್ಕೆ ಮಂಗಳವಾರ ಚುನಾವಣಾ ವೀಕ್ಷಕರೊಂದಿಗೆ ಭೇಟಿ ನೀಡಿದ ಅವರು ಡಿಮಸ್ಟರಿಂಗ್ ಹಾಗೂ ಮತ ಎಣಿಕೆ ಕಾರ್ಯಗಳ ಸಿದ್ಧತೆಗಳ ಕುರಿತು ಚುನಾವಣಾ ವೀಕ್ಷಕರಿಗೆ ಮಾಹಿತಿ ನೀಡಿದರು.

ಬಳ್ಳಾರಿ ಜಿಲ್ಲೆಯಲ್ಲಿ ಚುನಾವಣೆ ಪ್ರಕ್ರಿಯೆಗಳನ್ನು ಅತ್ಯಂತ ಪಾರದರ್ಶಕವಾಗಿ ಕೈಗೊಳ್ಳಲಾಗುತ್ತಿದೆ. ಲೋಕಸಭೆ ಚುನಾವಣೆ ನಿಮಿತ್ಯ ಮೇ 07 ರಂದು ಮತದಾನ ನಡೆಯಲಿದ್ದು, ಅದೇ ದಿನ ಸಂಜೆ ಮತದಾನ ಪ್ರಕ್ರಿಯೆ ಮುಗಿದ ಬಳಿಕ ಲೋಕಸಭಾ ಕ್ಷೇತ್ರ (2 ನೇ ಪುಟಕ್ಕೆ)

## ಏ.28 ರಂದು ಬೆಳಗಾವಿಗೆ ನರೇಂದ್ರ ಮೋದಿ



ಬೆಳಗಾವಿ: ಏ. 28 ಕ್ಕೆ ರವಿವಾರ ಬೆಳಗಾವಿಗೆ ಪ್ರಧಾನ ನರೇಂದ್ರ ಮೋದಿಯವರು ಚುನಾವಣೆಯ ಬೃಹತ್ ಸಮಾವೇಶ ಮಡೆಸಲಿದ್ದಾರೆ. ಬೆಳಗಾವಿ ಲೋಕಸಭಾ ಹಾಗೂ ಚಿಕ್ಕೋಡಿ ಲೋಕಸಭಾ ಕ್ಷೇತ್ರ ಒಳಗೊಂಡಂತೆ ಬೃಹತ್ ಸಮಾವೇಶ ನಡೆಯಲಿದೆ ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಅನಿಲ ಬೆನಕೆ ಅವರು ತಿಳಿಸಿದರು.

ಇಂದು ನಗರದ ಬಿಜೆಪಿ ಮಾಧ್ಯಮ ಕಾರ್ಯಾಲಯದಲ್ಲಿ ಮಾಧ್ಯಮಗೊಷ್ಠಿ ನಡೆಸಿ ಮಾತನಾಡಿದ ಅವರು, ಏ.28 ಕ್ಕೆ ಸಾಯಂಕಾಲ 5 ಗಂಟೆಗೆ ಸಮಾವೇಶ ನಡೆಯಲಿದೆ ಎಂದು ಮಾಹಿತಿ ಇತ್ತು. ಆದರೆ ಸದ್ಯದ ಮಾಹಿತಿ ಪ್ರಕಾರ ಅಂದು ಬೆಳಗ್ಗೆ 11:30 ಕ್ಕೆ ಬೆಳಗಾವಿಗೆ ಆಗಮಿಸಿ, 12 ಗಂಟೆಗೆ ಸಮಾವೇಶದಲ್ಲಿ ಭಾಷಣ ಮಾಡಲಿದ್ದಾರೆ.

(2 ನೇ ಪುಟಕ್ಕೆ)

## ನೇಹಾ ಹಿರೇಮಠ ಹತ್ತೆ ಖಂಡಿಸಿ ಪ್ರತಿಭಟನೆ



ಬೆಳಗಾವಿ: ಚುನಾವಣೆಗೆ ಹೋಗಲು ಯಾವುದೇ ವಿಷಯವಿಲ್ಲದೆ ಹತಾಶರಾಗಿರುವ ಭಾರತೀಯ ಜನತಾಪಾರ್ಟಿವರು ನೇಹಾ ಹಿರೇಮಠ ಸಾವಿನ ಪ್ರಕರಣವನ್ನು ರಾಜಕೀಯಕ್ಕೆ ಬಳಸುವಂತಹ ನೀಚತನಕ್ಕಿಳಿದಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಳಗಾವಿಯಲ್ಲಿ ಮಂಗಳವಾರ ನೇಹಾ ಹಿರೇಮಠ ಆತ್ಮಕ್ಕೆ ಶಾಂತಿ ಸಿಗಲಿ, ಅಪರಾಧಿಗೆ ಕಠಿಣ ಶಿಕ್ಷೆಯಾಗಲಿ ಎಂದು ಆಗ್ರಹಿಸಿ ಕಾಂಗ್ರೆಸ್ ಪಕ್ಷದಿಂದ ಹಮ್ಮಿಕೊಳ್ಳಲಾಗಿದ್ದ ರ‍್ಯಾಲಿಯ ಸಂದರ್ಭದಲ್ಲಿ ಮಾಧ್ಯಮಗಳಿಗೆ ಅವರು ಪ್ರತಿಕ್ರಿಯೆ ನೀಡಿದರು.

ನೇಹಾ ಹಿರೇಮಠ ಆತ್ಮಕ್ಕೆ ಶಾಂತಿ ಸಿಗಲಿ, ನ್ಯಾಯ ಸಿಗಲಿ ಎಂದು ಈ ರ‍್ಯಾಲಿಯು ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡುತ್ತಿದ್ದೇವೆ. ಇಂತಹ ನೀಚ ಕೃತ್ಯವನ್ನು ವಿಕೃತ ಮನುಷ್ಯನಷ್ಟೇ ಮಾಡಬಹುದು. ಕಾನೂನು ಪ್ರಕಾರ ಅಪರಾಧಿಗೆ ಕಠಿಣ ಶಿಕ್ಷೆ ಕೊಡಬೇಕು ಎಂದು ಅವರು ಆಗ್ರಹಿಸಿದರು.

ಸರಕಾರ ಈಗಾಗಲೆ ಮಹಿಳೆಯರಿಗೆ ಆಗುವ ಅನ್ಯಾಯ ಪ್ರಕರಣಗಳನ್ನು ಶೀಘ್ರ ವಿಲೇವಾರಿ ಮಾಡಲೆಂದು ವಿಶೇಷ ನ್ಯಾಯಾಲಯ ಸ್ಥಾಪನೆ ಮಾಡಲು ನಿರ್ಧರಿಸಿದೆ. ತನ್ಮೂಲಕ ಮಹಿಳೆಯರ ಜೊತೆಗಿದ್ದೇವೆ ಎನ್ನುವುದನ್ನು ತೋರಿಸಿದ್ದೇವೆ. ಈ ವಿಷಯವನ್ನು ರಾಜಕೀಯ (2 ನೇ ಪುಟಕ್ಕೆ)

## ಜಿಲ್ಲಾ ಸ್ವೀಪ್ ಸಮಿತಿ; ಬೋಟಿಂಗ್ ಮುಖಾಂತರ ಮತದಾನ ಜಾಗೃತಿ

### ಪ್ರತಿಯಬ್ಬರೂ ಕಡ್ಡಾಯವಾಗಿ ಮತ ಚಲಾಯಿಸಿ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ



ಬೆಳಗಾವಿ, ಏ-: ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಮತದಾರರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಕೋಟೆ ಕೆರೆಯಲ್ಲಿ (ಕಿಲ್ಲಾ ಕೆರೆ) ಮಂಗಳ ವಾರ (ಏ.23) ಬೋಟಿಂಗ್ ಮುಖಾಂತರ ಏರ್ಪಡಿಸಲಾದ ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಹಾಗೂ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ಚಾಲನೆ ನೀಡಿದರು.ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಚಿಕ್ಕೋಡಿ, ಬೆಳಗಾವಿ ಲೋಕಸಭಾ ಮತ ಕ್ಷೇತ್ರಗಳ ಚುನಾವಣೆ ಮೇ.07 ರಂದು ನಡೆಯಲಿದೆ. ಬೆಳಿಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಮತದಾನದ ಸಮಯ ನಿಗದಿ ಪಡಿಸಲಾಗಿದೆ. ಎಲ್ಲ ಮತದಾರರು ಕಡ್ಡಾಯವಾಗಿ ಮತ ಚಲಾಯಿಸಬೇಕು ಹೇಳಿದರು.ಭಾರತ ಸಂವಿಧಾನ ನೀಡಿದ ಮತದಾನದ ಹಕ್ಕನ್ನು ಪ್ರತಿ ಮತದಾರರು ಚಲಾ ಯಿಸಬೇಕು. ಈಗಾಗಲೇ ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿಯ ವತಿ ಯಿಂದ ಬಹಳಷ್ಟು ಮತದಾನ ಜಾಗೃತಿ ಅಭಿಯಾನ ಹಮ್ಮಿಕೊ ಳ್ಳಲಾಗುತ್ತಿದೆ. ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.ಜಿಲ್ಲಾ ಸ್ವೀಪ್ ಸಮಿತಿಯ ವತಿಯಿಂದ ಬೆಳಗಾವಿ ಹಾಗೂ ಚಿಕ್ಕೋಡಿ ಲೋಕಸಭಾ ಮತ ಕ್ಷೇತ್ರಗಳಲ್ಲಿ ಮತದಾರರ ಜಾಗೃತಿ ಅಭಿಯಾನಗಳನ್ನು ಹಮ್ಮಿಕೊ ಳ್ಳಲಾಗುತ್ತಿದೆ. ನಮ್ಮ ಮತ ನಮ್ಮ ಹಕ್ಕು, ಎರಡು ಮತ ಕ್ಷೇತ್ರದ ಮತದಾ ರರು ಕಡ್ಡಾಯವಾಗಿ ಮತ ಚಲಾಯಿಸುವ ಮೂಲಕ ದೇಶ ಕಟ್ಟುವಲ್ಲಿ ಪಾತ್ರ ವಹಿಸಬೇಕು ಎಂದು ಲೋಕಸಭಾ ಮತ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ರಾಹುಲ್ ಶಿಂಧೆ ಅವರು ತಿಳಿಸಿದರು.ಮತದಾನ ಜಾಗೃತಿ ಫಲಕ ಪ್ರದರ್ಶನ: ಚುನಾವಣೆ ಪರ್ವ ದೇಶದ ಗರ್ವ, ಮತದಾನ ನಿಮ್ಮ ಹಕ್ಕು ಹಾಗೂ ನಿಮ್ಮ ಜವಾಬ್ದಾರಿ, ನೈತಿಕ ಮತದಾನ ಮಾಡಿ, ನನ್ನ ಮತ ನನ್ನ ಹಕ್ಕು, ನಿಮ್ಮ ಮತ ನಿಮ್ಮ ಭವಿಷ್ಯ, ಮತ ಚಲಾವಣೆ ನಿಮ್ಮ ಹಕ್ಕು, ನಿಮ್ಮ ಮತ ಅಮೂ ಲ್ಯ ತಪ್ಪದೇ ಮತ ಚಲಾಯಿ ಸಿ ಎಂಬ ವಿವಿಧ ಜಾಗೃತಿ ಫಲಕಗ ಳನ್ನು ಬೋಟಿಂಗ್ ಮೂಲಕ ಪ್ರದರ್ಶಿಸಲಾಯಿತು. ಜಿಲ್ಲಾ ಪಂಚಾ ಯತ್ ಮುಖ್ಯ ಕಾರ್ಯನಿರ್ವಹ ಕಾಧಿಕಾರಿ ರಾಹುಲ್ ಶಿಂಧೆ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾ ನಿರ್ದೇಶಕ ಗಂಗಾಧರ ದಿವಿಟರ, ಯೋಜನಾ ನಿರ್ದೇಶಕ ಕೃಷ್ಣರಾಜು,ಲೆಕ್ಕಾಧಿ ಕಾರಿ ಗಂಗಾ ಹಿರೇಮಠ್, ಮಹಾ ನಗರ ಪಾಲಿಕೆ ಸಿಬ್ಬಂದಿಗಳು, ಪೌರ ಕಾರ್ಮಿಕರು, ಜಿಲ್ಲಾ ಪಂಚಾಯತ್ ಸಿಬ್ಬಂದಿಗಳು, ಮತದಾನ ಜಾಗೃತಿ ಅಭಿಯಾನದಲ್ಲಿ ಪಾಲ್ಗೊಂಡಿದ್ದರು.

## ಮಿನೆರಾ ಕಾರ್ಖಾನೆಯಲ್ಲಿ ಕಾರ್ಮಿಕರಿಗೆ ಮತದಾನ ಜಾಗೃತಿ

### ಮತದಾನದಲ್ಲಿ ಪ್ರಜೆಗಳೇ ನಿರ್ಣಾಯಕರು, ತಪ್ಪದೇ ಮತದಾನ ಮಾಡಿ: ಜಿಪಂ ಸಿಇಒ ಕರೆ



ಬಳ್ಳಾರಿ,ಏ.23: ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜೆಗಳೇ ಅಂತಿಮ ನಿರ್ಣಾಯಕರಾಗಿದ್ದು, ಮೇ 07 ರಂದು ನಡೆಯುವ ಲೋಕಸಭಾ ಚುನಾವಣೆಗೆ ತಪ್ಪದೇ ಮತದಾನ ಮಾಡಿ ಎಂದು ಜಿಲ್ಲಾ ಸ್ವೀಪ್ ನೋಡೆಲ್ ಅಧಿಕಾರಿ ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಕರೆ ನೀಡಿದರು.ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಕೈಗಾರಿಕಾ ಕೇಂದ್ರ ಮತ್ತು ಸಂಡೂರು ತಾಲ್ಲೂಕು ಆಡಳಿತ, ತಾಲ್ಲೂಕು ಸ್ವೀಪ್ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ಕೈಗಾರಿಕಾ ವಲಯಗಳಲ್ಲಿ ಮತದಾನ ಪ್ರಮಾಣ ಹೆಚ್ಚಿಸಲು ಸುಲ್ತಾನಪುರ ಬಳಿಯ ಮಿನೆರಾ ಕಾರ್ಖಾನೆಯಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು. (2 ನೇ ಪುಟಕ್ಕೆ)

## ನರೇಂದ್ರ ಮೋದಿ ಮತ್ತು ಅಮಿತ್ ಶಾ ಕರ್ನಾಟಕವನ್ನು ಹಾಗೂ ರೈತರನ್ನು ದ್ವೇಷಿಸುತ್ತಾರೆ : ಸಿಎಂ ಸಿದ್ದರಾಮಯ್ಯ



ಬೆಂಗಳೂರು, ಏಪ್ರಿಲ್ 23: ಪ್ರಧಾನ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಕರ್ನಾಟಕವನ್ನು ಹಾಗು ರೈತರನ್ನು ದ್ವೇಷಿಸುತ್ತಾರೆ. ಕರ್ನಾಟಕಕ್ಕೆ ನ್ಯಾಯ ಕೊಡಿ ಎಂದು ಕೇಳಿದ್ದರೂ, ಇಂದಿನವರೆಗೂ ಕೇಂದ್ರ ಸರ್ಕಾರ ಸ್ಪಂದಿಸಿಲ್ಲ. ಅದಕ್ಕಾಗಿ ಪ್ರತಿಭಟನೆ ಹಮ್ಮಿಕೊಂಡು ರಾಜ್ಯ ಹಾಗೂ ದೇಶದ ಜನರ ಗಮನವನ್ನು ಸೆಳೆಯುವ ಪ್ರಯತ್ನ ಮಾಡಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ವಿಧಾನಸೌಧ ಮುಂಭಾಗ ಇರುವ ಗಾಂಧಿ ಪ್ರತಿಮೆಯ ಎದುರು ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಬರಬೇಕಾಗಿರುವ ಬರ ಪರಿಹಾರದಲ್ಲಿ ತಾರತಮ್ಯ ವನ್ನು ವಿರೋಧಿಸಿ ಕೇಂದ್ರ ಸರ್ಕಾರದ ವಿರುದ್ಧ ಧರಣಿಯಲ್ಲಿ ಪಾಲ್ಗೊಂಡ ನಂತರ ಮಾಧ್ಯಮ ದವರೊಂದಿಗೆ ಮಾತನಾಡಿದರು.

ಸೆಪ್ಟೆಂಬರ್ 22 ರಂದು ಕೇಂದ್ರ ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಿದ್ದು, ಕೇಂದ್ರ ತಂಡ 4 ದಿನಗಳ ಕಾಲ ಪರಿಶೀಲನೆ ಮಾಡಿ ಕೇಂದ್ರಕ್ಕೆ ವರದಿಯನ್ನು ಸಲ್ಲಿಸಿದ್ದಾರೆ. ಈ ಮಧ್ಯೆ ಸಚಿವ ಕೃಷ್ಣಭೈರೇಗೌಡ ಹಾಗು ಪ್ರಿಯಾಂಕ ಖರ್ಗೆ ಸಂಬಂಧ ಪಟ್ಟ ಸಚಿವರನ್ನು ಭೇಟಿ ಮಾಡಿ ಕರ್ನಾಟಕ ಎದುರಿಸುತ್ತಿರುವ ಬರಗಾಲದ ಬಗ್ಗೆ ವಿವರಿಸಿದ್ದಾರೆ. ರಾಜ್ಯದಲ್ಲಿ ಭೀಕರ ಬರಗಾಲವಿದ್ದು, 240 ತಾಲ್ಲೂಕುಗಳಲ್ಲಿ 223 ತಾಲ್ಲೂಕುಗಳನ್ನು ಬರಗಾಲ ಪೀಡಿತ ಎಂದು ಘೋಷಣೆ ಮಾಡಿದ್ದೇವೆ. 100 ವರ್ಷಗಳ ನಂತರ ಇಂಥ ಬರಗಾಲ ಎದುರಾಗಿದೆ. ಮನವಿ ಕೊಟ್ಟಿದ್ದರೂ ಕೂಡ ಅಮಿತ್ ಶಾ ಚನ್ನಪಟ್ಟಣಕ್ಕೆ ಬಂದಿದ್ದ ಸಂದರ್ಭದಲ್ಲಿ ಮನವಿಯನ್ನು ವಿಳಂಬವಾಗಿ ಸಲ್ಲಿಸಿದ್ದಾರೆ ಎಂದು ಹೇಳಿದ್ದರು ಎಂದರು.

ನಿರ್ಮಲಾ ಸೀತಾರಾಮನ್ ಅವರು ಗ್ಯಾರಂಟಿ ಯೋಜನೆಗಳಿಗೆ ಹಣ ಕೇಳುತ್ತಿದ್ದಾರೆ ಬರಗಾಲಕ್ಕೆ ಅಲ್ಲ ಎಂದು ಇಬ್ಬರೂ ಸುಳ್ಳು ಹೇಳಿದ್ದಾರೆ. ನಾವು ಗ್ಯಾರಂಟಿಗಳಿಗೆ ಒಂದೇ ಪೈಸೆಯನ್ನೂ ಕೇಂದ್ರದಿಂದ ಕೇಳಿಲ್ಲ. ನಮಗೆ ಬೇಕಾಗಿಯೂ ಇಲ್ಲ ಎಂದರು.

ಗ್ಯಾರಂಟಿಗಳಿಗೆ ನಮ್ಮ ಸಂಪನ್ಮೂಲದಿಂದಲೇ ಭರಿಸಿದ್ದೇವೆ. 36000 ಕೋಟಿ ರೂಪಾಯಿಗಳನ್ನು ಕಳೆದ ವರ್ಷ ಹಾಗೂ 52009 ಕೋಟಿ ರೂಪಾಯಿಗಳನ್ನು ಮುಂದಿನ ಸಾಲಿಗೆ ಮೀಸಲಿರಿಸಿದ್ದೇವೆ. ಬರಗಾಲಕ್ಕೆ 48000 ಹೆಕ್ಟೇರ್ ಪ್ರದೇಶ ಮಳೆ ಇಲ್ಲದೇ ಬೆಳೆ ನಷ್ಟವಾಗಿದೆ. ರೈತರು ಕಷ್ಟದಲ್ಲಿದ್ದಾರೆ. ನಮ್ಮ ಸರ್ಕಾರ 2000 ರೂ.ಗಳ ವರೆಗೆ 34 ಲಕ್ಷ ರೈತರಿಗೆ ನೀಡಲಾಗಿದೆ. 650 ಕೋಟಿ ರೂ.ಗಳನ್ನು ಇದಕ್ಕಾಗಿ ವೆಚ್ಚ ಮಾಡಲಾಗಿದೆ. ಬರಗಾಲವನ್ನು ಈವರೆಗೆ ಸಮರ್ಥವಾಗಿ ಎದುರಿಸಿದ್ದೇವೆ. ಕುಡಿಯುವ ನೀರು, ಮೇವು, ಜನರಿಗೆ ಕೆಲಸ, ಗುಳೇ ಹೋಗುವುದನ್ನು ತಪ್ಪಿಸುವುದು, ರೈತರಿಗೆ ಮೊದಲ ಕಂತಿನ ಪರಿಹಾರ ನೀಡುವುದನ್ನು ಮಾಡಿದ್ದೇವೆ. 18172 ಕೋಟಿ ಗಳನ್ನೂ ಕೇಂದ್ರಕ್ಕೆ ಎನ್.ಡಿ.ಆರ್.ಎಫ್ ನಂದ ಬಿಡುಗಡೆ ಮಾಡುವಂತೆ ಕೋರಿ ಒತ್ತಾಯ ಮಾಡಿದ್ದೇವೆ. ಇದನ್ನು ಮಂಡಿಸಿ 7 ತಿಂಗಳಾಗಿವೆ. ನಾನೇ ಸ್ವತಃ ಪ್ರಧಾನ ಮಂತ್ರಿಗಳನ್ನು ಭೇಟಿಯಾಗಿದ್ದೇನೆ. ಸಂಬಂಧಪಟ್ಟವರಿಗೆ ತಿಳಿಸಿ ಕೂಡಲೇ ಬಿಡುಗಡೆ ಮಾಡುವಂತೆ ಹೇಳುವುದಾಗಿ ಹೇಳಿದ್ದರು. ನಂತರ ನಾನು ಕೃಷ್ಣಭೈರೇಗೌಡ ಡಿಸೆಂಬರ್ 20 ತಂದು ಅಮಿತ್ ಶಾ ಅವರನ್ನು ಭೇಟಿ ಮಾಡಿದಾಗ ಡಿಸೆಂಬರ್ 23ಕೆ ಸಭೆ ಕರೆದು ಇತ್ಯರ್ಥ ಮಾಡುವುದಾಗಿ ಭರವಸೆ ನೀಡಿ ಈವರೆಗೆ ಏನೂ ಮಾಡಿಲ್ಲ. ನರೇಂದ್ರ ಮೋದಿ, ಅಮಿತ್ ಶಾ ಯಾವ ಮುಖ ಇಟ್ಟುಕೊಂಡು ಕರ್ನಾಟಕಕ್ಕೆ ಬರುತ್ತಾರೆ. (2 ನೇ ಪುಟಕ್ಕೆ)